## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಧಾರವಾಡ ರಂಗಾಯಣಕ್ಕೆ ಸುವರ್ಣ ಸಾಂಸ್ಕೃತಿಕ ಸಮುಚ್ಚಯ ನವೀಕರಣ ಹಾಗೂ ದುರಸ್ತಿಗಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ: ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಪತ್ರ ಸಂಖ್ಯೆ: ಡಿಕೆಸಿ/32012/111/2019, ದಿನಾಂಕ:25-02-2020.

* * *

**ಪ್ರಸ್ತಾವನೆ :**

ರಂಗಾಯಣಗಳಿಗೆ 2019-20ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಲೆಕ್ಕಶೀರ್ಷಿಕೆಯಡಿ ಅವಕಾಶ ಮಾಡಿಕೊಂಡಿರುವ ಅನುದಾನವನ್ನು ಈಗಾಗಲೇ 04 ಕಂತುಗಳಲ್ಲಿ ಬಿಡುಗಡೆ ಮಾಡಲಾಗಿದ್ದು, ಸದರಿ ಲೆಕ್ಕಶೀರ್ಷಿಕೆಯಡಿ ಅನುದಾನ ಲಭ್ಯವಿಲ್ಲದ ಕಾರಣ, ಧಾರವಾಡ ರಂಗಾಯಣಕ್ಕೆ ಸುವರ್ಣ ಸಾಂಸ್ಕೃತಿಕ ಸಮುಚ್ಚಯ ನವೀಕರಣ ಹಾಗೂ ದುರಸ್ತಿಗಾಗಿ ಲೆಕ್ಕಶೀರ್ಷಿಕೆ 2205-00-102-0-77-102 ಸಾಕ್ಷರತೆ ಮತ್ತು ಸಾಂಸ್ಕೃತಿಕ ಸಂಸ್ಥೆಗಳಿಗೆ ಅನುದಾನ ಶೀರ್ಷಿಕೆಯಡಿ ಉಳಿಕೆಯಾಗುವ ಮೊತ್ತ ರೂ.75.00 ಲಕ್ಷಗಳಲ್ಲಿ ಆಡಳಿತಾಧಿಕಾರಿಗಳು, ರಂಗಾಯಣ, ಧಾರವಾಡ ಇವರಿಗೆ ರೂ.25.00 ಲಕ್ಷಗಳನ್ನು ಲೆಕ್ಕಶೀರ್ಷಿಕೆ 2205-00-102-0-77-103 ಮರು ಹೊಂದಾಣಿಕೆ ಮಾಡಿ ಆದೇಶ ಹೊರಡಿಸುವಂತೆ ಮೇಲೆ ಓದಲಾದ ಪತ್ರದಲ್ಲಿ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಕಸಂವಾ 119 ಕಸಧ 2020 ಬೆಂಗಳೂರು ದಿನಾಂಕ:19-03-2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಧಾರವಾಡ ರಂಗಾಯಣಕ್ಕೆ ಸುವರ್ಣ ಸಾಂಸ್ಕೃತಿಕ ಸಮುಚ್ಚಯ ನವೀಕರಣ ಹಾಗೂ ದುರಸ್ತಿಗಾಗಿ 2019-20ನೇ ಸಾಲಿನ ಲೆಕ್ಕಶೀರ್ಷಿಕೆ 2205-00-102-0-77-102 ಸಾಕ್ಷರತೆ ಮತ್ತು ಸಾಂಸ್ಕೃತಿಕ ಸಂಸ್ಥೆಗಳಿಗೆ ಅನುದಾನ ಅಡಿ ಉಳಿಕೆಯಾಗುವ ಮೊತ್ತ ರೂ.75.00ಲಕ್ಷಗಳ ಅನುದಾನದಲ್ಲಿ ರೂ.25.00ಲಕ್ಷ (ರೂಪಾಯಿ ಇಪ್ಪತ್ತೈದು ಲಕ್ಷಗಳು ಮಾತ್ರ)ಗಳ ಅನುದಾನವನ್ನು 2019-20ನೇ ಸಾಲಿನ ಲೆಕ್ಕಶೀರ್ಷಿಕೆ 2205-00-102-0-77-103 ಗೆ ಮರುಹೊಂದಾಣಿಕೆಗೊಳಿಸಿ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿ ನೀಡಿದೆ.

(1) ಯಾವ ಉದ್ದೇಶಕ್ಕೆ ಹಣ ಮಂಜೂರು ಮಾಡಿದೆಯೋ ಅದೇ ಉದ್ದೇಶಕ್ಕೆ ಬಳಸತಕ್ಕದ್ದು.

(2) ಬಿಡುಗಡೆ ಮಾಡಿದ ಅನುದಾನ ಸಮರ್ಪಕವಾಗಿ ಬಳಕೆಯಾದ ಬಗ್ಗೆ ಲೆಕ್ಕಪರಿಶೋಧಕರಿಂದ ದೃಢೀಕರಿಸಿದ ಲೆಕ್ಕಪಟ್ಟಿ ಹಾಗೂ ಉಪಯುಕ್ತತಾ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.

2. ಈ ವೆಚ್ಚವನ್ನು 2019-20ನೇ ಸಾಲಿನ ಲೆಕ್ಕ ಶೀರ್ಷಿಕ ಲೆಕ್ಕಶೀರ್ಷಿಕೆ 2205-00-102-0-77-103 ಅಡಿಯಲ್ಲಿ ಭರಿಸತಕ್ಕದ್ದು.

3. ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ 01 ಟಿಎಫ್‌ಪಿ 2020, ದಿನಾಂಕ:13-01-2020ರನ್ವಯ ಹಾಗೂ ಆದೇಶ ಸಂಖ್ಯೆ:ಎಫ್‌ಡಿ 11 ಟಿಎಫ್‌ಪಿ 2007, ದಿನಾಂಕ: 27-11-2007 ರಲ್ಲಿ ಇಲಾಖಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರದತ್ತವಾದ ಅಧಿಕಾರ ಪ್ರತ್ಯಾಯೋಜನೆಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Malathi PS 19/3/20
(ಪಿ.ಎಸ್. ಮಾಲತಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ.
19/3/2020 (ಸಂಸ್ಕೃತಿ)

ಇವರಿಗೆ:

1) ಮಹಾಲೇಖಪಾಲರು, (ಎ&ಇ) ಕನಾಟಕ, ಬೆಂಗಳೂರು.
2) ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು.
3) ಯೋಜನಾ ನಿರ್ದೇಶಕರು, ಖಜಾನೆ-2, ಖನಿಜ ಭವನ, ಬೆಂಗಳೂರು.
4) ಖಜಾನಾಧಿಕಾರಿ, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
5) ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6) ಆಡಳಿತಾಧಿಕಾರಿಗಳು, ರಂಗಾಯಣ, ಧಾರವಾಡ (ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಮುಖಾಂತರ).
7) ಸರ್ಕಾರದ ಕಾರ್ಯದರ್ಶಿ/ಉಪ ಕಾರ್ಯದರ್ಶಿ, ಕನ್ನಡ ಸಂಸ್ಕೃತಿ ಮತ್ತು ವಾರ್ತಾ ಇಲಾಖೆ ರವರ ಆಪ್ತ ಶಾಖೆ, ವಿಕಾಸಸೌಧ, ಬೆಂಗಳೂರು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.